## ಮೈಸೂರು ವಿಶ್ವವಿದ್ಯಾನಿಲಯ

ಸಂಖ್ಯೆ: ಪ.ವಿ.8.1/ಪಿ.ಜಿ.ಸೆಮಿಸ್ಟರ್/ಪ್ರಕಟಣೆ/2009-10

ಕುಲಸಚಿವ (ಪರೀಕ್ಷಾಂಗ) ರವರ ಕಛೇರಿ,
ವಿಶ್ವವಿದ್ಯಾನಿಲಯ ಕಾರ್ಯಸೌಧ,
ಕ್ರಾಫರ್ಡ್‌ಭವನ, ಮೈಸೂರು-570 005,
ದಿನಾಂಕ: 07-09-2012.

### ಅಧಿಸೂಚನೆ

ವಿಷಯ:. ಸೆಪ್ಟಂಬರ್-2012ರ ಮಾಹೆಯಲ್ಲಿ ನಡೆಯಲಿರುವ ಸ್ನಾತಕ/ಸ್ನಾತಕೋತ್ತರ ಪದವಿಯ II & IV ನೇ ಸೆಮಿಸ್ಟರ್ ಮೇಕಪ್ (ಸಿಬಿಸಿಎಸ್ ಪದ್ಧತಿ) ಪರೀಕ್ಷೆಗಳಿಗೆ ಪರೀಕ್ಷಾ ಶುಲ್ಕ **ಪಾವತಿ ಮಾಡಲು ಮತ್ತು ಅಭ್ಯರ್ಥನ ಪತ್ರ ಸಲ್ಲಿಸುವ ಬಗೆಗೆ.**

ಉಲ್ಲೇಖ:- ವಿ.ವಿ.ಅಧಿಸೂಚನೆ ಸಂಖ್ಯೆ:ಎ.ಸಿ.7(ಎ)/420/2010-11, ದಿನಾಂಕ 16.07.2011.

*******

ಸೆಪ್ಟಂಬರ್ - 2012ರ ಮಾಹೆಯಲ್ಲಿ ನಡೆಯಲಿರುವ CBCS ಪದ್ಧತಿಯ II & IV ನೇ ಸೆಮಿಸ್ಟರ್‌ನ ಸ್ನಾತಕ/ಸ್ನಾತಕೋತ್ತರ ಪದವಿಯ ಮೇಕಪ್ ಪರೀಕ್ಷೆಗಳನ್ನು (Makeup Examination), ಸೆಪ್ಟಂಬರ್ 26, 27, 28, 29 ಮತ್ತು 30,2012ರಂದು **ವಿಶ್ವವಿದ್ಯಾನಿಲಯದ ಪರೀಕ್ಷಾಭವನದಲ್ಲಿ ಏರ್ಪಡಿಸಲಾಗಿದೆ.** ಪರೀಕ್ಷಾ ವೇಳಾ ಪಟ್ಟಿಯನ್ನು ಸಂಬಂಧಪಟ್ಟ ಅಧ್ಯಯನ ವಿಭಾಗಗಳು ಸಿದ್ಧಪಡಿಸಿ ಸಂಬಂಧಿಸಿದ ವಿಷಯಗಳನ್ನು (Concerned Subject) ಬೋಧನೆ ಮಾಡುತ್ತಿರುವ ಇತರ ಕೇಂದ್ರ/ ವಿಭಾಗ/ಕಾಲೇಜುಗಳಿಗೆ ಕಳುಹಿಸಿ ಕೊಡುವುದು ಹಾಗೂ ಅದರ ಒಂದು ಪ್ರತಿಯನ್ನು ಈ ಕಛೇರಿಗೂ ಸಹ ಕಳುಹಿಸುವುದು.

1. **Open Elective** ಪರೀಕ್ಷೆಗಳನ್ನು ದಿನಾಂಕ:-26-09-2012 ರಂದು ಮೂರು ಸೆಷನ್‌ಗಳಲ್ಲಿ(9-11, 12-2, ಮತ್ತು 3-5) ನಡೆಯುವಂತೆ ಮತ್ತು Hard Core & Soft Core ಗಳನ್ನು ಸೆಪ್ಟಂಬರ್ 27, 28, 29 ಮತ್ತು 30,2012 ರಂದು ಮೂರು ಸೆಷನ್‌ಗಳಲ್ಲಿ (9-11, 12-2, ಮತ್ತು 3-5) ನಡೆಯುವಂತೆ **ವೇಳಾಪಟ್ಟಿಯನ್ನು ಸಿದ್ಧಪಡಿಸುವುದು.**

| | | |
|---|---|---|
| 2. ಪರೀಕ್ಷಾ ಶುಲ್ಕ ಪಾವತಿಸಲು ಹಾಗೂ ಪರೀಕ್ಷಾ ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕ | : | 15-09-2012 |
| 3. ವೇಳಾಪಟ್ಟಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕೊನೆಯ ದಿನಾಂಕ | : | 17-09-2012 |
| 4. ಪ್ರಶ್ನೆ ಪತ್ರಿಕೆ ಬೇಡಿಕೆ ಪಟ್ಟಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕೊನೆಯ ದಿನಾಂಕ | : | 18-09-2012 |
| 5. **ಪರೀಕ್ಷಾ ಅರ್ಜಿಗಳು, ಪ್ರವೇಶ ಪತ್ರಗಳು, ಅಭ್ಯರ್ಥನ ಪಟ್ಟಿಗಳನ್ನು ವಿ.ವಿ.ನಿಲಯಕ್ಕೆ ಸಲ್ಲಿಸಲು ಕೊನೆಯ ದಿನಾಂಕ** | : | **20-09-2012** |

P.G.NOTIFICATION/MANJU/FOLDER/F:

## ಪರೀಕ್ಷಾ ಶುಲ್ಕಗಳ ವಿವರಗಳು

**1. M.Sc. Food Science/ Speech & Hearing/ MTA/ LLM/ M.Sc. Computer Science/M.Tech in URP/M.Sc. Bioscience / Polymer Science/ Biochemistry/ Biotechnology/ Environmental Science/ Sugar Technology/ Electronics/M.Lib.Sci./MFAM/MBA(Agri-Business)/MSW/M.Sc (Criminology & Forensic Science).**

| | | |
|---|---|---|
| i. | **Whole Exam (Per Sem/Exam)** | **₹1130.00** |
| ii. | **Per Paper with Practical** | **₹450.00** |
| iii. | Per paper without Practical | **₹285.00** |

**2. M.Com/M.Ed/M.A.Ed/M.Sc.Ed/M.P.Ed./M.Sc/M.Music/M.Dance/M.A and all other Master Degree Courses:**

| | | |
|---|---|---|
| i. | Whole Exam (Per exam) | ₹735.00 |
| ii. | Per Paper with Practical | ₹450.00 |
| iii. | Per Paper without Practical | ₹285.00 |

**3. B.A.Ed/B.Sc.Ed :**

| | | |
|---|---|---|
| i. | Whole Exam (Per exam) | ₹675.00 |
| ii. | Per Paper with Practical | ₹395.00 |
| iii. | Per Paper without Practical | ₹225.00 |

**4. Marks Card Fee (Per Year/Semester)** **₹160.00**

ವಿ.ವಿ.ಆದೇಶ ಸಂಖ್ಯೆ:ಎಸಿ.2(ಎಸ್)/122/04-05, ದಿನಾಂಕ: 04-02-2005ರ ಪ್ರಕಾರ ಎಲ್ಲಾ ಪದವಿ ಕೋರ್ಸ್‌ಗಳಿಗೆ ವಿದ್ಯಾರ್ಥಿಗಳು ಪ್ರತ್ಯೇಕವಾಗಿ ಪತ್ರಿಕೆಗಳ ಪರೀಕ್ಷೆ ತೆಗೆದುಕೊಂಡಲ್ಲಿ ಪಾವತಿಸಬೇಕಾದ ಗರಿಷ್ಠ ಪರೀಕ್ಷಾ ಶುಲ್ಕವು ಆಯಾಯ ವರ್ಷಕ್ಕೆ ವಿಷಯವಾರು ನಿಗದಿಗೊಳಿಸಲಾಗಿರುವ ಪೂರ್ಣ ಪರೀಕ್ಷಾ ಶುಲ್ಕಕ್ಕೆ (Whole examination fee) ಸಮಾನವಾಗಿರುತ್ತದೆಂದು ಈ ಮೂಲಕ ಸ್ಪಷ್ಟಪಡಿಸಲಾಗಿದೆ.

**ಸೂಚನೆಗಳು:**

1. **Makeup** ಪರೀಕ್ಷೆ ತೆಗೆದುಕೊಂಡಿರುವ II & IV ಸೆಮಿಸ್ಟರ್ ವಿದ್ಯಾರ್ಥಿಗಳ ಅಭ್ಯರ್ಥನ ಪಟ್ಟಿಯನ್ನು **(Candidate List)** ಪ್ರತ್ಯೇಕವಾಗಿ ಈ ಕಛೇರಿಗೆ ಕಳುಹಿಸುವುದು.
2. **Makeup** ಪರೀಕ್ಷೆ ಲಿಖಿತ, ಪ್ರಾಯೋಗಿಕ, ಮೌಖಿಕ, ಲಘು ಪ್ರಬಂಧ/ಪ್ರೌಢ ಪ್ರಬಂಧ/ಪ್ರಾಜೆಕ್ಟ್‌ಗಳಿಗೂ ಅನ್ವಯಿಸುತ್ತದೆ.
3. ಪರೀಕ್ಷಾ ಶುಲ್ಕವನ್ನು ಸ್ಟೇಟ್ ಬ್ಯಾಂಕ್ ಆಫ್ ಮೈಸೂರು, ಇಲ್ಲಿ ವಿಶ್ವವಿದ್ಯಾನಿಲಯದ ಪರೀಕ್ಷಾ ಖಾತೆಗೆ ಜಮಾ ಆಗುವಂತೆ ಪಾವತಿಸಬೇಕು.
4. ಪ್ರಾಯೋಗಿಕ, ಮೌಖಿಕ ಪರೀಕ್ಷೆಗಳ ವೇಳಾಪಟ್ಟಿಗಳನ್ನು (ಲಿಖಿತ ಪರೀಕ್ಷೆಗಳ ನಂತರ) ಪರೀಕ್ಷಾ ಮಂಡಳಿ ಅಧ್ಯಕ್ಷರೊಡನೆ ಸಮಾಲೋಚಿಸಿ ನಿಗದಿಪಡಿಸಿ ನಂತರ ಪರೀಕ್ಷೆ ನಡೆಸಿ ಅಂಕಗಳನ್ನು ವಿಶ್ವವಿದ್ಯಾನಿಲಯಕ್ಕೆ ಕಳುಹಿಸುವುದು.
5. ಅನುತ್ತೀರ್ಣ ವಿದ್ಯಾರ್ಥಿಗಳು ಮತ್ತು ಅಂಕಗಳ ಮರುಸಂಕಲನ/ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳೂ ಸೇರಿದಂತೆ ಎಲ್ಲಾ ವಿದ್ಯಾರ್ಥಿಗಳು ಮೇಲೆ ಸೂಚಿಸಿದ ದಿನಾಂಕಗಳಂದು ಅಥವಾ ಅದಕ್ಕಿಂತ ಮುಂಚಿತವಾಗಿ ಪರೀಕ್ಷಾ ಶುಲ್ಕವನ್ನು ಪಾವತಿಸಿದ ಬ್ಯಾಂಕ್ ಚಲನ್ ಮತ್ತು ಇತ್ತೀಚಿನ ಭಾವಚಿತ್ರದೊಂದಿಗೆ ಪರೀಕ್ಷಾ ಅರ್ಜಿಗಳನ್ನು ತಾವು ಅಧ್ಯಯನ ಮಾಡಿದ ಸಂಸ್ಥೆಗಳ ಮುಖಾಂತರ ಕಳುಹಿಸಬೇಕು.

6. ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ/ಕ್ಯಾಟಗರಿ-I ಮತ್ತು ಪರೀಕ್ಷಾ ಶುಲ್ಕ ಪಾವತಿಯಿಂದ ವಿನಾಯಿತಿ ಪಡೆಯಲು ಅರ್ಹರಾದ ಇತರ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ ನಿಯಮಗಳಿಗನುಸಾರವಾಗಿ ಪರೀಕ್ಷಾ ಶುಲ್ಕ ಪಾವತಿಯಿಂದ ವಿನಾಯಿತಿ ನೀಡಲಾಗಿದೆ. ಆದರೂ ಅಂತಹ ಅಭ್ಯರ್ಥಿಗಳು ನಿಗದಿಪಡಿಸಿದಂತೆ ಅಂಕಪಟ್ಟಿ ಶುಲ್ಕವನ್ನು **ರೂ.160.00** ಪಾವತಿ ಮಾಡಬೇಕು. ವಿಭಾಗ/ಕಾಲೇಜಿನ ಮುಖ್ಯಸ್ಥರು ಈ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಸರ್ಕಾರದಿಂದ ಪಡೆದು ವಿಶ್ವವಿದ್ಯಾನಿಲಯಕ್ಕೆ ಪಾವತಿಸಲು ಸೂಕ್ತ ಕ್ರಮ ಕೈಗೊಳ್ಳುವುದು.

7. ಕ್ರ.ಸಂ.ಎ.ಸಿ.2/182/92-93, ದಿನಾಂಕ: 02-03-2000ರ ಕುಲಸಚಿವರ ಪತ್ರದಲ್ಲಿ ತಿಳಿಸಿರುವ ರೀತ್ಯಾ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ಹಾಗೂ ಕ್ಯಾಟಗರಿ-Iರ ವರ್ಗದ ವಿದ್ಯಾರ್ಥಿಗಳು ಸದರಿ ಕೋರ್ಸನ್ನು ಮುಗಿಸಿದ ನಂತರ ರಿಪೀಟರ್ಸ್ ಆಗಿ ಪರೀಕ್ಷೆಗಳನ್ನು ತೆಗೆದುಕೊಂಡಲ್ಲಿ ಅಂತಹ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕ ಮತ್ತು ಅಂಕಪಟ್ಟಿ ಶುಲ್ಕಗಳನ್ನು ತಪ್ಪದೆ ವಸೂಲು ಮಾಡಬೇಕೆಂದು ತಿಳಿಸಲಾಗಿದೆ.

8. ಒಮ್ಮೆ ಪಾವತಿ ಮಾಡಿದ ಪರೀಕ್ಷಾ ಶುಲ್ಕವನ್ನು ಯಾವುದೇ ಸಂದರ್ಭದಲ್ಲಿಯೇ ಆಗಲಿ ಮರುಪಾವತಿ ಮಾಡಲಾಗುವುದಿಲ್ಲ ಅಥವಾ ಮುಂದಿನ ಪರೀಕ್ಷೆಗೆ ಹೊಂದಾಣಿಕೆ ಮಾಡಲಾಗುವುದಿಲ್ಲ.

9. ಪರೀಕ್ಷೆಯ ಒಂದು ಭಾಗವಾಗಿರುವ ಲಘು ಪ್ರಬಂಧ/ಪ್ರೌಢ ಪ್ರಬಂಧ/ಪ್ರಾಜೆಕ್ಟ್ ಕಾರ್ಯ/ಕ್ಷೇತ್ರಕಾರ್ಯ ವರದಿ ಇತ್ಯಾದಿಗಳನ್ನು ನಿರ್ದಿಷ್ಟ ವಿಷಯದಲ್ಲಿನ ಲಿಖಿತ/ಪ್ರಾಯೋಗಿಕ ಪರೀಕ್ಷೆಯ ಕೊನೆಯ ದಿನಾಂಕದಂದು ಅಥವಾ ಅದಕ್ಕಿಂತ ಮುಂಚಿತವಾಗಿ ಸಂಬಂಧಪಟ್ಟ ಅಧ್ಯಯನ ವಿಭಾಗಗಳ ಅಧ್ಯಕ್ಷರು/ಮುಖ್ಯಸ್ಥರಿಗೆ ದ್ವಿಪ್ರತಿಗಳಲ್ಲಿ ಸಲ್ಲಿಸಬೇಕು. ಪ್ರೌಢಪ್ರಬಂಧದಲ್ಲಿ ವಿದ್ಯಾರ್ಥಿಯ ಹೆಸರು ಮತ್ತು ನೋಂದಣಿ ಸಂಖ್ಯೆಯನ್ನು ತಪ್ಪದೆ ನಮೂದಿಸುವುದು.

**ವಿಶೇಷ ಸೂಚನೆ:**

1) ಇತರ ಕೇಂದ್ರ/ವಿಭಾಗ/ಕಾಲೇಜುಗಳಿಂದ ಪರೀಕ್ಷೆ ತೆಗೆದುಕೊಳ್ಳುವ ವಿಷಯ/ವಿದ್ಯಾರ್ಥಿಗಳ ವಿವರಗಳನ್ನು ಸಂಬಂಧಪಟ್ಟ ಅಧ್ಯಯನ ವಿಭಾಗಗಳ ಅಧ್ಯಕ್ಷರುಗಳಿಗೆ ತಪ್ಪದೆ ತಿಳಿಸುವುದು.
2) ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರು/ನಿರ್ದೇಶಕರು/ಕಾಲೇಜುಗಳ ಮುಖ್ಯಸ್ಥರುಗಳು ಪರೀಕ್ಷಾ ಸಂಬಂಧ ಎಲ್ಲಾ ದಾಖಲೆಗಳನ್ನು ನಿಗದಿತ ದಿನಾಂಕದೊಳಗೆ ಕಳುಹಿಸಿಕೊಡುವುದು.
3) **II & IV** ಸೆಮಿಸ್ಟರ್‌ನ ಮೇಕಪ್ ಪರೀಕ್ಷೆಗಳನ್ನು ವಿಶ್ವವಿದ್ಯಾನಿಲಯದ ಪರೀಕ್ಷಾಭವನದಲ್ಲಿ ಏರ್ಪಡಿಸಿರುವುದನ್ನು ಮತ್ತು ರಜಾ ದಿನಗಳಲ್ಲೂ ಸಹ ಈ ಪರೀಕ್ಷೆಗಳನ್ನು ಏರ್ಪಡಿಸಿರುವುದನ್ನು ವಿದೇಶಿ ವಿದ್ಯಾರ್ಥಿಗಳು ಒಳಗೊಂಡತೆ ಎಲ್ಲಾ ವಿದ್ಯಾರ್ಥಿಗಳ ಗಮನಕ್ಕೆ ತರಬೇಕಾಗಿ ತಿಳಿಸಲಾಗಿದೆ.
4) ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳು ಪ್ರವೇಶ ಪತ್ರದ ಜೊತೆಯಲ್ಲಿ ವಿದ್ಯಾರ್ಥಿಯ ID ಯನ್ನು ಸಹ ತರುವಂತೆ ವಿದ್ಯಾರ್ಥಿಗಳಿಗೆ ತಿಳಿಸುವುದು.

**Draft Approved**
**by Registrar(Eva)**

ಕುಲಸಚಿವ (ಪರೀಕ್ಷಾಂಗ)
04/09 7/9/12

ಇವರಿಗೆ:

1. ಎಲ್ಲಾ ಸ್ನಾತಕೋತ್ತರ ವಿಭಾಗಗಳ/ಸಂಸ್ಥೆಗಳ ಅಧ್ಯಕ್ಷರು/ನಿರ್ದೇಶಕರು, ಮಾಗಂ, ಮೈಸೂರು.
2. ನಿರ್ದೇಶಕರು/ಮುಖ್ಯಸ್ಥರು, ಸ್ನಾತಕೋತ್ತರ ಕೇಂದ್ರ, ಮಂಡ್ಯ ಮತ್ತು ಹಾಸನ.
3. ಮುಖ್ಯಸ್ಥರು, ವಿಶ್ವವಿದ್ಯಾನಿಲಯದ ಸ್ಯಾಟಲೇಟ್ ಕೇಂದ್ರ, ಚಾಮರಾಜನಗರ.
4. ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಜ್ಞಾನ ಅಧ್ಯಯನ ವಿಭಾಗ, ಮೈ.ವಿ.ವಿ.ಮೈಸೂರು
5. ಪೂಜ ಭಗವತ್ ಮೆಮೊರಿಯಲ್ ಮಹಾಜನ ಶಿಕ್ಷಣ ಕೇಂದ್ರ, ಮೇಟಗಳ್ಳಿ, ಕೆ.ಆರ್.ಎಸ್. ರಸ್ತೆ, ಮೈಸೂರು.
6. ಮಹಾಜನ ಪ್ರಥಮ ದರ್ಜೆ ಕಾಲೇಜು, ಜಯಲಕ್ಷ್ಮಿಪುರಂ, ಮೈಸೂರು
7. ವಾಕ್ ಮತ್ತು ಶ್ರವಣ ಸಂಸ್ಥೆ, ಮಾನಸಗಂಗೋತ್ರಿ, ಮೈಸೂರು
8. ಜೆ.ಎಸ್.ಎಸ್. ವಾಕ್ ಮತ್ತು ಶ್ರವಣ ಸಂಸ್ಥೆ, ಊಟಿ ರಸ್ತೆ, ಮೈಸೂರು.
9. ಪ್ರಾದೇಶಿಕ ಶಿಕ್ಷಣ ಸಂಸ್ಥೆ, ಮಾನಸಗಂಗೋತ್ರಿ, ಮೈಸೂರು.
10. ಮಹಾರಾಜ ಕಾಲೇಜು, ಮೈಸೂರು.
11. ಲಲಿತಕಲಾ ಕಾಲೇಜು, ಮಾನಸಗಂಗೋತ್ರಿ, ಮೈಸೂರು.
12. ಮಹಾರಾಣಿ ಮಹಿಳಾ ಕಲಾ ಮತ್ತು ವಾಣಿಜ್ಯ ಕಾಲೇಜು, ಮೈಸೂರು.
13. ಮಹಾರಾಣಿ ವಿಜ್ಞಾನ ಕಾಲೇಜು, ಮೈಸೂರು.
14. ಸೆಂಟ್ ಫಿಲೋಮಿನಾ ಕಾಲೇಜು, ಬನ್ನಿಮಂಟಪ, ಮೈಸೂರು.